I/537674/2024

ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಡಿಟಿಇ/1/ಎಲ್ಆರ್‌ಡಿಸಿ/2024(1284788)

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ,
ಬೆಂಗಳೂರು-560001,
ದಿನಾಂಕ:09/01/2024.

**: ಸುತ್ತೋಲೆ :**

ವಿಷಯ: 2022-23 ನೇ ಸಾಲಿನಲ್ಲಿ ಡಿಪ್ಲೋಮಾ ಹಾಗು ಇಂಜಿನಿಯರಿಂಗ್ ಪದವಿಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳು "ಕರ್ನಾಟಕ ಯುವನಿಧಿ ಯೋಜನೆ"ಯಲ್ಲಿ ನೊಂದಣಿ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಆದೇಶ ಸಂಖ್ಯೆ: ಕೌಉಜೀಇ 55 ಕೃತಇ 2023, ದಿನಾಂಕ:03.06.2023

******

ಮೇಲ್ಕಂಡ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ 2022-23ನೇ ಶೈಕ್ಷಣಿಕ ಸಾಲಿನಲ್ಲಿ ಡಿಪ್ಲೋಮಾ ಹಾಗು ಇಂಜಿನಿಯರಿಂಗ್ ಪದವಿಯಲ್ಲಿ ತೇರ್ಗಡೆಯಾದ ದಿನಾಂಕದಿಂದ 180 ದಿನಗಳು ಉದ್ಯೋಗ ಲಭಿಸದ ಡಿಪ್ಲೋಮಾ ಹಾಗು ಇಂಜಿನೀಯರಿಂಗ್ ಪದವೀಧರ ನಿರುದ್ಯೋಗಿಗಳಿಗೆ ಪ್ರತಿ ತಿಂಗಳು ಕ್ರಮವಾಗಿ ರೂ.1500.00 ಹಾಗೂ 3000.00 (ಒಂದು ಸಾವಿರದ ಐದು ನೂರು ಹಾಗೂ ಮೂರು ಸಾವಿರ ಮಾತ್ರ) ನಿರುದ್ಯೋಗ ಭತ್ಯೆ ನೀಡುವ ಸಂಬಂಧ ಕರ್ನಾಟಕ ಸರ್ಕಾರವು "ಕರ್ನಾಟಕ ಯುವನಿಧಿ ಯೋಜನೆ" ಯನ್ನು ಅನುಷ್ಠಾನಗೊಳಿಸಿರುತ್ತದೆ. ಯುವನಿಧಿ ಮೊತ್ತವನ್ನ ಅರ್ಹ ಫಲಾನುಭವಿಗಳ ಬ್ಯಾಂಕ್ ಖಾತೆಗೆ ನೇರವಾಗಿ DBT ಮೂಲಕ ವರ್ಗಾವಣೆ ಮಾಡಲಾಗುತ್ತದೆ.

2022-23 ನೇ ಸಾಲಿನಲ್ಲಿ ಡಿಪ್ಲೋಮಾ ಹಾಗೂ ಇಂಜಿನೀಯರಿಂಗ್ ಪದವಿಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ ಇಲಾಖೆಯ ವ್ಯಾಪ್ತಿಯ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಪಾಲಿಟೆಕ್ನಿಕ್‌ಗಳ ಹಾಗು ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳು / ಪ್ಲೇಸ್‌ಮೆಂಟ್ ಅಧಿಕಾರಿಗಳು / ಸಿಬ್ಬಂದಿಗಳು ಈ ಯೋಜನೆಯ ಬಗ್ಗೆ ಅರಿವು ಮೂಡಿಸಲು ಮತ್ತು ನೋಂದಣಿ ಮಾಡಿಕೊಳ್ಳುವಂತೆ ಸೂಚಿಸುವ ಮಾಹಿತಿಯನ್ನು ವ್ಯಾಟ್ಸಪ್ / ಮಿಂಚಂಚೆ /ಸಾಮಾಜಿಕ ಸಂವಹನ ಮುಖಾಂತರ ಹಾಗೂ ಸಂಸ್ಥೆಗಳ ಸೂಚನಾ ಫಲಕದಲ್ಲಿ ಪ್ರಕಟಿಸಿ ಸೂಕ್ತ ಮಾರ್ಗದರ್ಶನ ನೀಡಬೇಕೆಂದು ಈ ಮೂಲಕ ಸೂಚಿಸಲಾಗಿದೆ.

ಕರ್ನಾಟಕ ಯುವ ನಿಧಿ ಯೋಜನೆಗೆ ಅರ್ಜಿ ಸಲ್ಲಿಸಲು ಇರುವ ಷರತ್ತು ಮತ್ತು ನಿಬಂಧನೆಗಳನ್ನು ಉಲ್ಲೇಖಿತ ಸರ್ಕಾರಿ ಆದೇಶದಲ್ಲಿ ನಮೂದಿಸಲಾಗಿದೆ (ಪ್ರತಿ ಲಗತ್ತಿಸಿದೆ) . ಅರ್ಹ ಅಭ್ಯರ್ಥಿಗಳು ಈ ಕೆಳಗಿನ ಪೋರ್ಟಲ್/ಕಛೇರಿಗಳಲ್ಲಿಅರ್ಜಿ ಸಲ್ಲಿಸಬಹುದು.

1. https://sevasindhugs.karnataka.gov.in/
2. ಕರ್ನಾಟಕ- ಒನ್
3. ಬಾಪೂಜಿ ಸೇವಾ ಕೇಂದ್ರಗಳು

4. ಗ್ರಾಮ-ಒನ್‌ಕೇಂದ್ರಗಳು.

ಕರ್ನಾಟಕ ಯುವ ನಿಧಿ ಯೋಜನೆಗೆ ಸಂಬಂದಿಸಿದಂತೆ ಹೆಚ್ಚಿನ ಮಾಹಿತಿಗಾಗಿ **ಸಹಾಯವಾಣಿ:18005999919** ಮತ್ತು **ಜಿಲ್ಲಾ ಉದ್ಯೋಗ ಅಧಿಕಾರಿಗಳನ್ನು** ಸಂರ್ಪಕಿಸುವುದು.

**ವಿ.ಸೂಚನೆ:** ಅರ್ಹಅಭ್ಯರ್ಥಿಗಳು ಮೇಲ್ಕಾಣಿಸಿದ ಪೋರ್ಟಲ್/ಕಛೇರಿಗಳಲ್ಲಿ ನೊಂದಾಯಿಸಲು ಪಾಲಿಟೆಕ್ನಿಕ್ ಹಾಗೂ ಇಂಜನೀಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳು ಕ್ರಮಕೈಗೊಂಡು, ತೆಗೆದುಕೊಂಡ ಕ್ರಮಗಳ ಬಗ್ಗೆ ಇಲಾಖೆ ಗೆ ಮಾಹಿತಿಯನ್ನು ತಪ್ಪದೇ ನೀಡಲು ಸೂಚಿಸಿದೆ.

(ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.)

ಜಂಟಿ ನಿರ್ದೇಶಕರು(ತಾಂ),
ತಾಂತ್ರಿಕ ಶಿಕ್ಷಣ ಇಲಾಖೆ.

10/01/24

10/1/2024

**ಇವರಿಗೆ**

1. ರಾಜ್ಯದ ಎಲ್ಲಾ ಸರ್ಕಾರಿ ಅನುದಾನಿತ ಮತ್ತು ಅನುದಾನ ರಹಿತ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಇ-ಆಡಳಿತ ವಿಭಾಗಕ್ಕೆ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು.
3. ಕಛೇರಿಪ್ರತಿ